All India Radio: Bangalore
National Bulletin In Kannada
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

11.6.2025 19.35 P.M.

<><><><>

ಮುಖ್ಯಾಂಶಗಳು

- ಬಳ್ಳಾರಿ-ಚಿಕ್ಕಜಾಜೂರ್ ರೈಲ್ವೆ ಮಾರ್ಗ ಡಬ್ಲಿಂಗ್ ಯೋಜನೆಗೆ ಕೇಂದ್ರ ಸಚಿವ ಸಂಪುಟ ಅನುಮೋದನೆ
- ಜುಲೈ ೧ ರಿಂದ ಆನ್‌ಲೈನ್ ತತ್ಕಾಲ್ ಟಿಕೆಟ್ ಬುಕ್ ಮಾಡಲು ಆಧಾರ್‌ನೊಂದಿಗೆ ಐಆರ್‌ಸಿಟಿಸಿ ಖಾತೆ ದೃಢೀಕರಣ ಕಡ್ಡಾಯ
- ಐರೋಪ್ಯ ಒಕ್ಕೂಟದ ಸಂಸತ್ ಅಧ್ಯಕ್ಷರೊಂದಿಗೆ ವಿದೇಶಾಂಗ ಸಚಿವ ಡಾ. ಎಸ್.ಜೈಶಂಕರ್ ದ್ವಿಪಕ್ಷೀಯ ಮಾತುಕತೆ
- ಐಸಿಸಿ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ; ಫೈನಲ್ ಪಂದ್ಯದಲ್ಲಿ ಆಸ್ಟ್ರೇಲಿಯಾ ವಿರುದ್ಧ ಟಾಸ್ ಗೆದ್ದ ದಕ್ಷಿಣ ಆಫ್ರಿಕಾ ಫೀಲ್ಡಿಂಗ್ ಆಯ್ಕೆ

<><><><>

ಕೇಂದ್ರ ಸಚಿವ ಸಂಪುಟವು ರೈಲ್ವೆ ಸಚಿವಾಲಯದ ಎರಡು ಯೋಜನೆಗಳಿಗೆ ಅನುಮೋದನೆ ನೀಡಿದೆ. ಒಟ್ಟು ೬ ಸಾವಿರದ ೪೦೫ ಕೋಟಿ ರೂಪಾಯಿಗಳ ಯೋಜನೆಗಳಲ್ಲಿ ಕರ್ನಾಟಕದ ಬಳ್ಳಾರಿ-ಚಿಕ್ಕಜಾಜೂರ್ ಮತ್ತು ಜಾರ್ಖಂಡ್‌ನ ಕೊಡೆರ್ಮಾ-ಬರ್ಕಕಾ ನಡುವಿನ ರೈಲ್ವೆ ಡಬ್ಲಿಂಗ್ ಮಾರ್ಗಗಳು ಸೇರಿವೆ. ಈ ಕುರಿತು ನವದೆಹಲಿಯಲ್ಲಿ ಮಾಧ್ಯಮಗಳಿಗೆ ಮಾಹಿತಿ ನೀಡಿದ ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ೧೩೩ ಕಿಲೋಮೀಟರ್‌ಗಳ ಕೊಡೆರ್ಮಾ-ಬರ್ಕಕಾ ರೈಲ್ವೆ ಡಬ್ಲಿಂಗ್ ಯೋಜನೆಯು ೯೩೮ ಹಳ್ಳಿಗಳು ಮತ್ತು ೧೫ ಲಕ್ಷ ಜನರಿಗೆ ವರ್ಧಿತ ಸಂಪರ್ಕವನ್ನು ಒದಗಿಸುತ್ತದೆ ಎಂದು ಹೇಳಿದರು. ಈ ಯೋಜನೆಗಳು ಜಾರ್ಖಂಡ್‌ನ ನಾಲ್ಕು ಜಿಲ್ಲೆಗಳಾದ ಕೊಡೆರ್ಮಾ, ಛತ್ರ, ಹಜಾರಿಭಾಗ್ ಮತ್ತು ರಾಮ್‌ಗಢವನ್ನು ಸಂಪರ್ಕಿಸುತ್ತವೆ. ಯೋಜನಾ ವಿಭಾಗವು ಜಾರ್ಖಂಡ್‌ನ ಪ್ರಮುಖ ಕಲ್ಲಿದ್ದಲು ಉತ್ಪಾದಿಸುವ ಪ್ರದೇಶದ ಮೂಲಕ ಹಾದು ಹೋಗುತ್ತದೆ ಎಂದು ಅವರು ಮಾಹಿತಿ ನೀಡಿದರು. ೧೮೫ ಕಿಲೋಮೀಟರ್‌ಗಳ ಬಳ್ಳಾರಿ ಚಿಕ್ಕಜಾಜೂರ್ ರೈಲ್ವೆ ಡಬ್ಲಿಂಗ್ ಯೋಜನೆಯು ಮಂಗಳೂರು ಬಂದರನ್ನು ಸಿಕಂದರಾಬಾದ್‌ಗೆ ಸಂಪರ್ಕಿಸುತ್ತದೆ. ಈ ಯೋಜನೆಯ ಮಾರ್ಗವು ಕರ್ನಾಟಕದ ಬಳ್ಳಾರಿ ಮತ್ತು ಚಿತ್ರದುರ್ಗ ಜಿಲ್ಲೆಗಳು ಹಾಗೂ ಆಂಧ್ರಪ್ರದೇಶದ ಅನಂತಪುರ ಜಿಲ್ಲೆಯ ಮೂಲಕ ಹಾದು ಹೋಗುತ್ತದೆ ಎಂದು ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದರು.

ಧ್ವನಿ : ಅಶ್ವಿನಿ ವೈಷ್ಣವ್ (೩೦ ಸೆಕೆಂಡ್‌ಗಳು)

ಕರ್ನಾಟಕ, ಜಾರ್ಖಂಡ್ ಮತ್ತು ಆಂಧ್ರಪ್ರದೇಶ ರಾಜ್ಯಗಳಾದ್ಯಂತ ೭ ಜಿಲ್ಲೆಗಳನ್ನು ಒಳಗೊಂಡ ಈ ಎರಡು ಯೋಜನೆಗಳು ಭಾರತೀಯ ರೈಲ್ವೆಯ ಅಸ್ತಿತ್ವದಲ್ಲಿರುವ ಜಾಲವನ್ನು ಸುಮಾರು ೩೧೮ ಕಿಲೋಮೀಟರ್‌ಗಳಷ್ಟು ಹೆಚ್ಚಿಸುತ್ತದೆ. ಇದು ೨೮ ಲಕ್ಷಕ್ಕೂ ಹೆಚ್ಚು ಜನರು ಒಳಗೊಂಡಿರುವ ೧ ಸಾವಿರದ ೪೦೦ಕ್ಕೂ ಹೆಚ್ಚು ಹಳ್ಳಿಗಳಿಗೆ ಸಂಪರ್ಕ ಕಲ್ಪಿಸುತ್ತದೆ ಎಂದು ಸಚಿವರು ಮಾಹಿತಿ ನೀಡಿದರು.

<><><>

ಕಳೆದ ಒಂದು ದಶಕದಲ್ಲಿ ಭಾರತ, ಸರ್ವತೋಮುಖವಾಗಿ ಗಮನಾರ್ಹ ಬದಲಾವಣೆಯನ್ನು ಕಂಡಿದ್ದು, ಸೇವೆ, ಸುಶಾಸನ ಮತ್ತು ಬಡವರ ಕಲ್ಯಾಣದ ತತ್ವದಡಿ ಮುನ್ನಡೆಯುತ್ತಿದೆ. ಕೇಂದ್ರ ಸರ್ಕಾರ ಕಳೆದ ೧೧ ವರ್ಷಗಳಲ್ಲಿ ಕೈಗೊಂಡಿರುವ ಹಲವು ಪ್ರಮುಖ ಪ್ರಯತ್ನಗಳ ಕುರಿತು ಆಕಾಶವಾಣಿ ಸುದ್ದಿ ವಿಭಾಗ ವಿಶೇಷ ವರದಿಯನ್ನು ಪ್ರಸಾರ ಮಾಡುತ್ತಿದೆ. ಇಂದಿನ ಮಾಲಿಕೆಯಲ್ಲಿ ಜೀವನ ಸುಗಮಗೊಳಿಸುವಿಕೆ, ಸುಧಾರಣೆಗಳು ಮತ್ತು ಉಪಕ್ರಮಗಳ ಕುರಿತ ವರದಿ ಇಲ್ಲಿದೆ.

ಧ್ವನಿ : ವಿಶೇಷ ವರದಿ (ಚೇತನ್ ೫೭ ಸೆಕೆಂಡ್‌ಗಳು)

ಮಧ್ಯಮ ವರ್ಗದವರ ದೈನಂದಿನ ಜೀವನವನ್ನು ಸುಧಾರಿಸುವುದು ಕಳೆದ ದಶಕದಲ್ಲಿ ಆಡಳಿತದ ಕೇಂದ್ರಬಿಂದುವಾಗಿದೆ. ಪ್ರಧಾನ ಮಂತ್ರಿ ಆವಾಸ್ ಯೋಜನೆ ಅಡಿಯಲ್ಲಿ, ೧.೧೭ ಕೋಟಿಗೂ ಹೆಚ್ಚು ಮನೆಗಳನ್ನು ಮಂಜೂರು ಮಾಡಲಾಗಿದೆ. ಸುಮಾರು ೯೩ ಲಕ್ಷ ಮನೆಗಳನ್ನು ಈಗಾಗಲೇ ಪೂರ್ಣಗೊಳಿಸಲಾಗಿದೆ. ಸ್ಮಾರ್ಟ್ ಸಿಟಿ ಮಿಷನ್ ಮೂಲಸೌಕರ್ಯವನ್ನು ಅಭಿವೃದ್ಧಿ ಪಡಿಸಲಾಗಿದೆ. ಮೆಟ್ರೋ ಜಾಲವು ಒಂದು ದಶಕದಲ್ಲಿ ನಾಲ್ಕು ಪಟ್ಟು ಹೆಚ್ಚಾಗಿದೆ, ೨೦೧೪ ರಲ್ಲಿ ಕೇವಲ ೨೪೮ ಕಿಲೋಮೀಟರ್‌ಗಳಿಂದ ೨೦೨೫ ರಲ್ಲಿ ೧ ಸಾವಿರ ಕಿಲೋ ಮೀಟರ್‌ಗಳಿಗೆ ಹೆಚ್ಚಿಸಲಾಗಿದೆ. ಉಡಾನ್ ಯೋಜನೆಯು ವಿಮಾನ ಪ್ರಯಾಣವನ್ನು ಕೈಗೆಟುಕುವಂತೆ ಮಾಡಿದೆ. ಪ್ರಧಾನ ಮಂತ್ರಿ ಜನ ಆರೋಗ್ಯ ಯೋಜನೆಯು ವಿಶ್ವದ ಅತಿದೊಡ್ಡ ಸಾರ್ವಜನಿಕ ನಿಧಿಯ ಆರೋಗ್ಯ ಭರವಸೆ ಯೋಜನೆಗಳಲ್ಲಿ ಒಂದಾಗಿದೆ - ೪೧ ಕೋಟಿಗೂ ಹೆಚ್ಚು ಆಯುಷ್ಮಾನ್ ಕಾರ್ಡ್‌ಗಳನ್ನು ನೀಡಲಾಗಿದೆ. ಈಗ ೧೭ ಸಾವಿರಕ್ಕೂ ಹೆಚ್ಚು ಸಂಖ್ಯೆಯ ಜನೌಷಧಿ ಕೇಂದ್ರಗಳ ಏರಿಕೆಯು ಗುಣಮಟ್ಟದ ಔಷಧಿಗಳನ್ನು ಶೇಕಡಾ ೮೦ ರಷ್ಟು ಅಗ್ಗವಾಗಿಸಿದೆ ಮತ್ತು ಅಗತ್ಯ ಔಷಧಿಗಳನ್ನು ಸಾಮಾನ್ಯ ನಾಗರಿಕರಿಗೆ ತಲುಪುವಂತೆ ಮಾಡಿದೆ.

<><><>

ಕಲ್ಯಾಣ ಆಧಾರಿತ ಅಭಿವೃದ್ಧಿಗೆ ಕೇಂದ್ರ ಸರ್ಕಾರದ ಅಚಲ ಬದ್ಧತೆಯನ್ನು ಪ್ರಧಾನಿ ನರೇಂದ್ರ ಮೋದಿ ಪುನರುಚ್ಚರಿಸಿದರು. ಇದು ವಿವಿಧ ಜನಪರ ಯೋಜನೆಗಳು ಗರಿಷ್ಠ ಸಂಖ್ಯೆಯ ನಾಗರಿಕರನ್ನು ತಲುಪುವುದನ್ನು ಖಚಿತಪಡಿಸುತ್ತವೆ ಎಂದು ಅವರು ಹೇಳಿದರು. ಅಂತಾರಾಷ್ಟ್ರೀಯ ಕಾರ್ಮಿಕ ಸಂಸ್ಥೆಯ ಇತ್ತೀಚಿನ ಮಾಹಿತಿಯ ಪ್ರಕಾರ, ಭಾರತದ ಸಾಮಾಜಿಕ ಭದ್ರತಾ ವ್ಯಾಪ್ತಿಯು ೨೦೧೫ರಲ್ಲಿ ಶೇಕಡ ೧೯ ರಿಂದ ೨೦೨೫ರವರೆಗೆ ಶೇಕಡ ೬೪.೩ಕ್ಕೆ ಏರಿಕೆಯಾಗಿದೆ. ಕೇಂದ್ರ

ಕಾರ್ಮಿಕ ಮತ್ತು ಉದ್ಯೋಗ ಸಚಿವ ಡಾ. ಮನ್ಸುಖ್ ಮಾಂಡವೀಯ ಅವರ ಸಾಮಾಜಿಕ ಮಾಧ್ಯಮ ಪೋಸ್ಟ್‌ಗೆ ಪ್ರತಿಕ್ರಿಯಿಸಿರುವ ಪ್ರಧಾನಿ ಮೋದಿ, ಈ ಉಪಕ್ರಮಗಳ ಪರಿಣಾಮಕಾರಿತ್ವ ಮತ್ತು ವ್ಯಾಪ್ತಿಯ ಏರಿಕೆಯನ್ನು ಶ್ಲಾಘಿಸಿದ್ದಾರೆ.

<><><><>

ಜುಲೈ ೧ ರಿಂದ ಆಧಾರ್‌ನೊಂದಿಗೆ ತಮ್ಮ ಐಆರ್‌ಸಿಟಿಸಿ ಖಾತೆಯನ್ನು ದೃಢೀಕರಿಸಿದ ಬಳಕೆದಾರರು ಮಾತ್ರ ಐಆರ್‌ಸಿಟಿಸಿ ವೆಬ್‌ಸೈಟ್ ಮತ್ತು ಅಪ್ಲಿಕೇಷನ್ ಮೂಲಕ ಆನ್‌ಲೈನ್ ತತ್ಕಾಲ್ ಟಿಕೆಟ್‌ಗಳನ್ನು ಬುಕ್ ಮಾಡಲು ಸಾಧ್ಯವಾಗುತ್ತದೆ ಎಂದು ರೈಲ್ವೆ ಸಚಿವಾಲಯ ತಿಳಿಸಿದೆ. ತತ್ಕಾಲ್ ಟಿಕೆಟ್‌ಗಳಿಗೆ ನ್ಯಾಯಯುತ ಮತ್ತು ಪಾರದರ್ಶಕ ಪ್ರವೇಶವನ್ನು ಖಚಿತಪಡಿಸಿಕೊಳ್ಳಲು ಮತ್ತು ಪ್ರಯಾಣಿಕರ ಹಿತಾಸಕ್ತಿಗಳನ್ನು ರಕ್ಷಿಸಲು ಈ ಕ್ರಮ ಕೈಗೊಳ್ಳಲಾಗಿದೆ. ನೂತನ ಯೋಜನೆಯ ಪ್ರಕಾರ, ಈ ವರ್ಷದ ಜುಲೈ ೧೫ ರಿಂದ ಆನ್‌ಲೈನ್ ತತ್ಕಾಲ್ ಬುಕ್ಕಿಂಗ್‌ಗಳಿಗೆ ಆಧಾರ್ ಆಧಾರಿತ ಒಟಿಪಿ ದೃಢೀಕರಣ ಕಡ್ಡಾಯವಾಗಲಿದೆ. ಗಣಕೀಕೃತ ಪ್ರಯಾಣಿಕ ಕಾಯ್ದಿರಿಸುವಿಕೆ ಕೇಂದ್ರಗಳಲ್ಲಿ ಮತ್ತು ಅಧಿಕೃತ ಏಜೆಂಟ್‌ಗಳ ಮೂಲಕ ಬುಕ್ ಮಾಡಿದ ತತ್ಕಾಲ್ ಟಿಕೆಟ್‌ಗಳಿಗೆ ಬುಕ್ಕಿಂಗ್ ಸಮಯದಲ್ಲಿ ಬಳಕೆದಾರರು ಒದಗಿಸಿದ ಮೊಬೈಲ್ ಸಂಖ್ಯೆಗೆ ಒಟಿಪಿ ದೃಢೀಕರಣವನ್ನು ಕಳುಹಿಸಬೇಕಾಗುತ್ತದೆ. ಭಾರತೀಯ ರೈಲ್ವೆಯ ಅಧಿಕೃತ ಟಿಕೆಟ್ ಏಜೆಂಟ್‌ಗಳು ಬುಕ್ಕಿಂಗ್ ವಿಂಡೋದ ಮೊದಲ ೩೦ ನಿಮಿಷಗಳಲ್ಲಿ ಆರಂಭಿಕ ದಿನದ ತತ್ಕಾಲ್ ಟಿಕೆಟ್‌ಗಳನ್ನು ಬುಕ್ ಮಾಡಲು ಅನುಮೋದಿಸಲಾಗುವುದಿಲ್ಲ. ಹವಾನಿಯಂತ್ರಿತ ಬೋಗಿಗಳಿಗೆ ಈ ನಿರ್ಬಂಧವು ಬೆಳಗ್ಗೆ ೧೦ ರಿಂದ ೧೦.೩೦ರವರೆಗೆ ಹಾಗೂ ಹವಾನಿಯಂತ್ರಿತವಲ್ಲದ ಬೋಗಿಗಳಿಗೆ ಬೆಳಗ್ಗೆ ೧೧ ರಿಂದ ೧೧.೩೦ರವರೆಗೆ ಅನ್ವಯಿಸುತ್ತದೆ.

<><><><>

ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಇಂದು ಬ್ರಸೆಲ್ಸ್‌ನಲ್ಲಿ ಐರೋಪ್ಯ ಒಕ್ಕೂಟದ ಸಂಸತ್‌ನ ಅಧ್ಯಕ್ಷ ರಾಬರ್ಟ್ ಮೆಟ್ಸೋಲಾ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಿದರು. ಈ ವೇಳೆ ಭಾರತ-ಐರೋಪ್ಯ ಒಕ್ಕೂಟ ಸಂಸದೀಯ ಸಂಬಂಧಗಳನ್ನು ಮತ್ತಷ್ಟು ಬಲಪಡಿಸುವ, ಪ್ರಜಾಪ್ರಭುತ್ವ ಮತ್ತು ಬಹುತ್ವದ ಹಂಚಿಕೆಯ ಮೌಲ್ಯಗಳ ಮೇಲೆ ನಿರ್ಮಿಸುವ ಬಗ್ಗೆ ಚರ್ಚಿಸಿದರು. ವ್ಯಾಪಾರ, ತಂತ್ರಜ್ಞಾನ ಮತ್ತು ಭದ್ರತೆಯಲ್ಲಿ ಭಾರತ-ಐರೋಪ್ಯ ಒಕ್ಕೂಟದ ಪಾಲುದಾರಿಕೆ ಮುಂದುವರೆಸುವ ಬಗ್ಗೆ ಸಭೆಯಲ್ಲಿ ಸಕಾರಾತ್ಮಕ ಚರ್ಚೆ ನಡೆಯಿತು ಎಂದು ಸಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಸಚಿವ ಡಾ. ಎಸ್. ಜೈಶಂಕರ್ ತಿಳಿಸಿದ್ದಾರೆ.

<><><><>

ಪ್ರಸಕ್ತ ಹಣಕಾಸು ವರ್ಷದಲ್ಲಿ ಭಾರತದ ಆರ್ಥಿಕ ಬೆಳವಣಿಗೆಯು ಶೇಕಡ ೬.೩ ರಷ್ಟು ದಾಖಲಿಸುವ ನಿರೀಕ್ಷೆಯಿದೆ ಎಂದು ವಿಶ್ವಬ್ಯಾಂಕ್ ಅಂದಾಜಿಸಿದೆ. ವಿಶ್ವದ ಅತಿದೊಡ್ಡ ಆರ್ಥಿಕತೆಗಳಲ್ಲಿ ಒಂದಾಗಿರುವ ಭಾರತವು, ಅತ್ಯಂತ ವೇಗದ ಬೆಳವಣಿಗೆಯ ದರವನ್ನು ಕಾಯ್ದುಕೊಳ್ಳುವ

ನಿರೀಕ್ಷೆಯಿದೆ ಎಂದು ವಿಶ್ವಬ್ಯಾಂಕ್ ಹೇಳಿದೆ. ವಿಶ್ವಬ್ಯಾಂಕ್ ಇತ್ತೀಚಿನ ಜಾಗತಿಕ, ಆರ್ಥಿಕ ನಿರೀಕ್ಷೆಗಳ ವರದಿಯ ಪ್ರಕಾರ, ಕೈಗಾರಿಕಾ ಉತ್ಪಾದನೆಯ ಬೆಳವಣಿಗೆಯಲ್ಲಿನ ಕುಸಿತದಿಂದಾಗಿ ೨೦೨೪-೨೫ನೇ ಹಣಕಾಸು ವರ್ಷದಲ್ಲಿ ಭಾರತದ ಬೆಳವಣಿಗೆ ಸಾಮಾನ್ಯವಾಗಿತ್ತು. ಆದಾಗ್ಯೂ, ನಿರ್ಮಾಣ ಮತ್ತು ಸೇವಾ ಕ್ಷೇತ್ರಗಳಲ್ಲಿನ ಬೆಳವಣಿಗೆ ಸ್ಥಿರವಾಗಿತ್ತು ಮತ್ತು ಕೃಷಿ ಉತ್ಪಾದನೆಯು ಚೇತರಿಸಿಕೊಂಡಿತು.

<><><>

೧೯೬೦ ರಿಂದ ಇಂದಿನವರೆಗೆ ಪ್ರತಿವರ್ಷವು ಪರಿಷ್ಕರಣೆಯ ಸಮಯದಲ್ಲಿ ಮತ್ತು ಚುನಾವಣೆಗಳ ಮೊದಲು ಭಾರತದ ಮತದಾರರ ಪಟ್ಟಿಯನ್ನು ಎಲ್ಲ ಮಾನ್ಯತೆ ಪಡೆದ ರಾಜಕೀಯ ಪಕ್ಷಗಳೊಂದಿಗೆ ಶಾಸನ ಬದ್ಧವಾಗಿ ಹಂಚಿಕೊಳ್ಳಲಾಗುತ್ತಿದೆ ಎಂದು ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಹೇಳಿದ್ದಾರೆ. ಚುನಾವಣಾ ಸಮಗ್ರತೆಯ ಕುರಿತು ಸ್ವೀಡನ್‌ನಲ್ಲಿ ನಡೆದ ಸ್ಟಾಕ್‌ಹೋಮ್ ಅಂತಾರಾಷ್ಟ್ರೀಯ ಸಮ್ಮೇಳನ ಉದ್ದೇಶಿಸಿ ಮಾತನಾಡಿದ ಅವರು, ಈ ಕಾರ್ಯ ವಿಧಾನವು ಹಕ್ಕುಗಳು, ಆಕ್ಷೇಪಣೆಗಳು ಮತ್ತು ಮೇಲ್ಮನವಿಗಳ ನಿಂಬಂಧನೆಯನ್ನು ಹೊಂದಿದೆ. ಇದು ವಿಶ್ವದ ಅತ್ಯಂತ ಕಠಿಣ ಮತ್ತು ಪಾರದರ್ಶಕ ಪ್ರಕ್ರಿಯೆಗಳಲ್ಲಿ ಒಂದಾಗಿದೆ. ಇದು ಚುನಾವಣಾ ಪ್ರಕ್ರಿಯೆಯ ನಿಖರತೆ ಮತ್ತು ಸಮಗ್ರತೆಯನ್ನು ಬಲಪಡಿಸುತ್ತದೆ ಎಂದು ಪ್ರತಿಪಾದಿಸಿದರು. ಸಮ್ಮೇಳನದ ನೇಪಥ್ಯದಲ್ಲಿ ಜ್ಞಾನೇಶ್ ಕುಮಾರ್ ಅವರು, ಮೆಕ್ಸಿಕೊ, ಇಂಡೋನೇಷಿಯಾ, ಮಂಗೋಲಿಯಾ, ದಕ್ಷಿಣ ಆಫ್ರಿಕಾ, ಸ್ವಿಡ್ಜರ್‌ಲ್ಯಾಂಡ್, ಮೊಲ್ಡೊವಾ, ಲಿಥುವೇನಿಯಾ, ಜರ್ಮನಿ, ಕ್ರೋವೇಶಿಯಾ, ಉಕ್ರೇನ್ ಮತ್ತು ಬ್ರಿಟನ್‌ನ ಮುಖ್ಯ ಚುನಾವಣಾ ಆಯುಕ್ತರೊಂದಿಗೆ ದ್ವಿಪಕ್ಷೀಯ ಸಭೆಗಳನ್ನು ನಡೆಸಿದರು.

<><><>

ವಿದೇಶಾಂಗ ಕಾರ್ಯದರ್ಶಿ ವಿಕ್ರಂ ಮಿಸ್ರಿ ಅವರು, ಅಬುದಾಬಿಯಲ್ಲಿ ಯುಎಇ ಅಂತಾರಾಷ್ಟ್ರೀಯ ಸಹಕಾರ ರಾಜ್ಯ ಸಚಿವ ರೀಮ್ ಅಲ್ ಹಾಶಿಮ್ ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಿದರು. ಈ ವೇಳೆ ಭಾರತ ಮತ್ತು ಯುಎಇ ನಡುವಿನ ಸಮಗ್ರ ಕಾರ್ಯತಂತ್ರದ ಪಾಲುಗಾರಿಕೆಯ ವ್ಯಾಪ್ತಿಯನ್ನು ಪರಿಶೀಲಿಸಿದರು. ವ್ಯಾಪಾರ, ಹೂಡಿಕೆಗಳು, ಇಂಧನ, ಸಂಸ್ಕೃತಿ, ರಕ್ಷಣೆ, ತಂತ್ರಜ್ಞಾನ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಬಹು ಆಯಾಮದ ದ್ವಿಪಕ್ಷೀಯ ಪಾಲುದಾರಿಕೆಯನ್ನು ವಿಸ್ತರಿಸುವ ಕುರಿತು ಚರ್ಚಿಸಲಾಯಿತು.

<><><>

ಲಂಡನ್‌ನ ಲಾರ್ಡ್ಸ್ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಐಸಿಸಿ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್‌ಸ - ೨೦೨೫ ಫೈನಲ್ ಪಂದ್ಯದಲ್ಲಿ ಆಸ್ಟ್ರೇಲಿಯಾ ಮತ್ತು ದಕ್ಷಿಣ ಆಫ್ರಿಕಾ ತಂಡಗಳು ಮುಖಾಮುಖಿಯಾಗಿವೆ.  ಟಾಸ್ ಗೆದ್ದ ದಕ್ಷಿಣ ಆಫ್ರಿಕಾ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

ಮೊದಲು ಬ್ಯಾಟ್ ಮಾಡುತ್ತಿರುವ ಆಸ್ಟ್ರೇಲಿಯಾ ತಂಡ ತನ್ನ ಮೊದಲ ಇನ್ನಿಂಗ್ಸ್‌ನಲ್ಲಿ ಇತ್ತೀಚಿನ ವರದಿ ಬಂದಾಗ ೪೯.೩ ಓವರ್‌ಗಳಲ್ಲಿ ೫ ವಿಕೆಟ್ ನಷ್ಟಕ್ಕೆ ೧೯೦ ರನ್ ಮಾಡಿ ಆಡುತ್ತಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>